ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 370 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 10.03.2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| ಅ) ರಾಜ್ಯದಲ್ಲಿ ಉದ್ಯೋಗ ಪಡೆಯಲು ಬೇಕಾದ ಕೌಶಲ್ಯ ಹೊಂದಿರುವ ಯುವಜನರ ಸಂಖ್ಯೆ ಎಷ್ಟು; | **ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)**<br><br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ 2017-18ನೇ ಸಾಲಿನಿಂದ 2024-25ನೇ ಸಾಲಿನವರೆಗೆ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ವಿವಿಧ ಕಾರ್ಯಕ್ರಮಗಳನ್ನು ಒಳಗೊಂಡಂತೆ **247264** ಅಭ್ಯರ್ಥಿಗಳು ಕೌಶಲ್ಯಯುತರಾಗಿದ್ದು, ಪ್ರಧಾನ ಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ 2017-18ನೇ ಸಾಲಿನಿಂದ 2021-22ನೇ ಸಾಲಿನವರೆಗೆ **34146** ಅಭ್ಯರ್ಥಿಗಳು ಕೌಶಲ್ಯಯುತರಾಗಿರುತ್ತಾರೆ.<br><br>**ರಾಷ್ಟ್ರೀಯ ಜೀವನೋಪಾಯ ಅಭಿಯಾನ**<br><br>**ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆ-ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)**<br><br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಮೂಲಕ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ (DDU-GKY) 2013-14ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಉದ್ಯೋಗ ಪಡೆಯಲು ಬೇಕಾದ ಕೌಶಲ್ಯ ಹೊಂದಿದವರ ಸಂಖ್ಯೆ 57234. |
| (ಆ) ಬೆಂಗಳೂರು ನಗರ ಉದ್ಯೋಗ ಒದಗಿಸುವಲ್ಲಿ ಮುಂಚೂಣಿಯಲ್ಲಿದೆಯೇ; ಹಾಗಿದ್ದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಯುವಜನರು ಉದ್ಯೋಗಕ್ಕೆ ನೇಮಕಗೊಂಡಿದ್ದಾರೆ; | **ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ**<br><br>ಬೆಂಗಳೂರು ನಗರದಲ್ಲಿ ಕಳೆದ 3 ವರ್ಷಗಳಲ್ಲಿ 49 ನೇರ ಸಂದರ್ಶನ/ಮಿನಿ ಉದ್ಯೋಗ ಮೇಳಗಳನ್ನು ಆಯೋಜಿಸಿದ್ದು, ಆ ಮೂಲಕ 4555 ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ.<br><br>**ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)**<br><br>ಹೌದು.<br>ಕರ್ನಾಟಕ ರಾಜ್ಯದ ಪ್ರಮುಖ ನಗರಗಳ ಪೈಕಿ ಬೆಂಗಳೂರು ನಗರವು ಒಂದಾಗಿದ್ದು, 2021-22, 2022-23 ಮತ್ತು 2023-24 ನೇ ಸಾಲಿನಲ್ಲಿ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ **708** ಫಲಾನುಭವಿಗಳು ಉದ್ಯೋಗ/ಸ್ವ-ಉದ್ಯೋಗವನ್ನು ಹೊಂದಿರುತ್ತಾರೆ ಹಾಗೂ ಬೆಂಗಳೂರು |

ನಗರದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡಿರುವ ಉದ್ಯೋಗ ಮೇಳದ ವಿವರ ಈ ಕೆಳಕಂಡಂತೆ ಇರುತ್ತದೆ.

| ಕ್ರಮ ಸಂಖ್ಯೆ | ಆರ್ಥಿಕ ವರ್ಷ | Offer Letter ಪಡೆದ ಅಭ್ಯರ್ಥಿಗಳ ಸಂಖ್ಯೆ |
|---|---|---|
| 1 | 2021-22 | 382 |
| 2 | 2022-23 | 541 |
| 3 | 2023-24 | 9654 |
| Total | | **10577** |

**ರಾಷ್ಟ್ರೀಯ ಜೀವನೋಪಾಯ ಅಭಿಯಾನ**

**ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆ-ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)**

ಡಿಡಿಯು-ಜಿಕೆವೈ ಕಾರ್ಯಕ್ರಮದಡಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಉದ್ಯೋಗಕ್ಕೆ ನೇಮಕಗೊಂಡಿರುವ ಯುವಜನರ ವಿವರ ಈ ಕೆಳಕಂಡಂತಿದೆ.

| ವರ್ಷ | 2021-22 | 2022-23 | 2023-24 | ಒಟ್ಟು |
|---|---|---|---|---|
| ಉದ್ಯೋಗಕ್ಕೆ ನೇಮಕಗೊಂಡ ಅಭ್ಯರ್ಥಿಗಳ ಸಂಖ್ಯೆ | 30 | 76 | 11 | 117 |

(ಇ) ಇಂಗ್ಲೀಷ್ ಭಾಷೆ, ಕಂಪ್ಯೂಟರ್ ಕೌಶಲ್ಯ, ಸಂಖ್ಯಾ ಕೌಶಲ್ಯ, ವಿಮರ್ಶಾತ್ಮಕ ಚಿಂತನೆ (Critical thinking) ಕೌಶಲ್ಯಗಳಲ್ಲಿ ರಾಜ್ಯ ಇತರೆ ರಾಜ್ಯಗಳಿಗಿಂತ ಹಿಂದುಳಿಯಲು ಕಾರಣಗಳೇನು;

**ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)**

ಕರ್ನಾಟಕ ರಾಜ್ಯ ದೇಶದಲ್ಲಿಯೇ ಕೌಶಲ್ಯ ಕಾರ್ಯಕ್ರಮಗಳ ಅನುಷ್ಠಾನದಲ್ಲಿ 5ನೇ ಸ್ಥಾನದ ಒಳಗೆ ಇದ್ದು, ಈಗಾಗಲೇ ಕಲಬುರ್ಗಿ, ಬಾಗಲಕೋಟೆ, ಹಾಸನ, ಮೈಸೂರು, ವಿಜಯಪುರ, ಬೆಂಗಳೂರು, ಕೊಪ್ಪಳ, ಯಾದಗಿರಿ, ಚಿತ್ರದುರ್ಗ, ಚಾಮರಾಜನಗರ, ಮಂಗಳೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಇಂಗ್ಲೀಷ್ ಭಾಷಾ ಪ್ರಯೋಗ ಶಾಲೆಗಳ ಮುಖೇನ ಭಾಷಾ ಕಲಿಕೆಯನ್ನು ಉತ್ತಮಗೊಳಿಸಲಾಗುತ್ತಿದೆ. ಜೊತೆಗೆ IMC-K ಗಾಗಿ ಜರ್ಮನ್ ಮತ್ತು ಜಪಾನೀ ಭಾಷಾ ಪ್ರಯೋಗಶಾಲೆಗಳ ಸ್ಥಾಪನೆಯ ಕಾರ್ಯವು ಪ್ರಗತಿಯಲ್ಲಿದೆ. ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಆಯೋಜಿಸುತ್ತಿರುವ ತರಬೇತಿಗಳಲ್ಲಿ Soft Skills ಕಲಿಸಲಾಗುತ್ತಿದ್ದು, ಸಂಖ್ಯಾಶಾಸ್ತ್ರ, (Tally, GST.,.ಇತರೆ) ಕುರಿತಂತೆ ತರಬೇತಿ ಆಯೋಜಿಸಲಾಗುತ್ತಿರುತ್ತದೆ. ಈ ಹಿನ್ನಲೆಯಲ್ಲಿ ರಾಜ್ಯವು ಇತರೆ ರಾಜ್ಯಗಳಿಗಿಂತ ಹಿಂದುಳಿದಿರುವುದಿಲ್ಲ.

**ರಾಷ್ಟ್ರೀಯ ಜೀವನೋಪಾಯ ಅಭಿಯಾನ**

**ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆ-ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)**

ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯ ತರಬೇತಿ ಕಾರ್ಯಕ್ರಮದ ಪಠ್ಯಕ್ರಮದ ಅನುಗುಣವಾಗಿ ಇಂಗ್ಲೀಷ್ ಭಾಷೆ, ಕಂಪ್ಯೂಟರ್ ಕೌಶಲ್ಯ, ಜೀವನ ಕೌಶಲ್ಯ, ಸಂಖ್ಯಾ ಕೌಶಲ್ಯ, ವಿಮರ್ಶಾತ್ಮಕ ಚಿಂತನೆ (Critical thinking) ಕೌಶಲ್ಯಗಳು ಸೇರಿದಂತೆ ತರಬೇತಿಯನ್ನು ನೀಡಲಾಗುತ್ತಿದೆ. ಪ್ರತಿ ಅಭ್ಯರ್ಥಿಗಳಿಗೆ 160 ಗಂಟೆಗಳ ಅವಧಿಯಲ್ಲಿ ಈ ಅವಶ್ಯಕ ವಿಷಯಗಳ ಕುರಿತಾದ

| | |
|---|---|
| | ಜ್ಞಾನ ಮತ್ತು ಕೌಶಲ್ಯ ತರಬೇತಿಗಳನ್ನು ಒದಗಿಸಲಾಗುತ್ತಿದೆ. |
| (ಈ) ಕೌಶಲ್ಯಗಳನ್ನು ಸುಧಾರಿಸುವ ಪರಿಣಾಮಕಾರಿಯಾಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು? | **ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ (ಕೆ.ಎಸ್.ಡಿ.ಸಿ)**<br><br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಕೌಶಲ್ಯಗಳನ್ನು ಸುಧಾರಿಸುವ ನಿಟ್ಟಿನಲ್ಲಿ ಯೋಜನೆ/ಕಾರ್ಯಕ್ರಮಗಳಲ್ಲಿ ಬದಲಾವಣೆ, ಮಾರ್ಗಸೂಚಿಯಡಿ ಬದಲಾವಣೆಯನ್ನು ಕೈಗೊಂಡಿರುವುದರೊಂದಿಗೆ ಪರಿಣಾಮಕಾರಿ ಕ್ರಮವಹಿಸಲಾಗಿರುತ್ತದೆ. (ಉದಾ: ರಾಜ್ಯಕ್ಕೆ ಪ್ರತ್ಯೇಕ ಉದ್ಯೋಗ ನೀತಿ, ಕೈಗಾರಿಕೆಗಳನ್ನು ತರಬೇತಿ ಪಾಲುದಾರರನ್ನಾಗಿಸಿ ತರಬೇತಿಯೊಂದಿಗೆ ಉದ್ಯೋಗ ಒದಗಿಸುವುದು, ಕಲಿಕೆ ಜೊತೆಗೆ ಕೌಶಲ್ಯ, ವೃತ್ತಿ ಮಾರ್ಗದರ್ಶನ ಕಾರ್ಯಕ್ರಮಗಳು ಮತ್ತು ಇತರೆ)<br><br>**ರಾಷ್ಟ್ರೀಯ ಜೀವನೋಪಾಯ ಅಭಿಯಾನ**<br><br>**ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆ-ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)**<br><br>ರಾಜ್ಯದಲ್ಲಿ ಡಿಡಿಯು-ಜಿಕೆವೈ ಕಾರ್ಯಕ್ರಮದಡಿ ಒದಗಿಸಲಾಗುವ ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಎಲ್ಲಾ ಹಂತಗಳಲ್ಲೂ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಚಟುವಟಿಕೆಯನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ.<br><br>ಮುಂದುವರೆದು, ಯೋಜನೆಯಡಿ CXO Meet, Alumini Meet ಆಯೋಜನೆ ಮತ್ತು ಉತ್ತಮ ಅಭ್ಯಾಸಗಳ ಪ್ರಕಟಣೆ, IEC ಚಟುವಟಿಕೆಗಳು ಹಾಗೂ ಅವರೊಂದಿಗೆ ಸಂವಾದ ಮುಂತಾದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಮೂಲಕ ಕೌಶಲ್ಯ ಸುಧಾರಣೆಗೆ ನಿರಂತರ ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಕೌಉಜೀಇ 7 ಕೌಗುಪ್ರ 2025

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.